# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 471 |
| ಮಾನ್ಯ ಸದಸ್ಯರ ಹೆಸರು | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 22-12-2022 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಗ್ರಾಮೀಣ ಪ್ರದೇಶಗಳಲ್ಲಿ ಕಾನೂನುಬಾಹಿರವಾಗಿ ಅಕ್ರಮ ಮದ್ಯ ಮಾರಾಟ ಮಾಡುವುದು ಮತ್ತು ಕಳ್ಳಭಟ್ಟಿ ಸಾರಾಯಿ ತಯಾರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ.<br>ಅಕ್ರಮ ಮದ್ಯ ಮಾರಾಟ ಹಾಗೂ ಕಳ್ಳಭಟ್ಟಿ ತಡೆಯಲು ವಲಯ ವ್ಯಾಪ್ತಿಯ ರೂಟ್‌ಗಳಲ್ಲಿ ನಿರಂತರವಾಗಿ ಗಸ್ತು ನಡೆಸಲಾಗುತ್ತಿದೆ. ಸದರಿ ಗಸ್ತಿನ ಸಮಯದಲ್ಲಿ ದೂರು ಸ್ವೀಕೃತವಾದಲ್ಲಿ ಅಕ್ರಮವಾಗಿ ಮಾರಾಟವಾಗುತ್ತಿರುವ ಸ್ಥಳಗಳ ಮೇಲೆ ದಾಳಿ ನಡೆಸಿ ಅಕ್ರಮಗಳು ಕಂಡು ಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಹತ್ತಿಕ್ಕಲು ಕ್ರಮ ವಹಿಸುವ ಕುರಿತು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 50 ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ತಿಳುವಳಿಕೆ ಪತ್ರ ಜಾರಿಗೊಳಿಸಲಾಗಿರುತ್ತದೆ. ಅಕ್ರಮ ಚಟುವಟಿಕೆಯಲ್ಲಿ ತೊಡಗಿರುವವರ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 32, 34 ಮತ್ತು 15(ಎ)ರನ್ವಯ ಪ್ರಕರಣ ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.<br>ಕಳೆದ ಮೂರು ವರ್ಷಗಳಲ್ಲಿ ರಾಜ್ಯಾದ್ಯಂತ ನಡೆಸಿದ ದಾಳಿ, |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 20/12/2022 11:33 AM

ದಾಖಲಿಸಿರುವ ಪ್ರಕರಣಗಳು, ವಶಪಡಿಸಿಕೊಂಡ ವಸ್ತುಗಳ ಹಾಗೂ ವಿಧಿಸಲಾಗಿರುವ ದಂಡದ ವಿವರಗಳು ಕೆಳಕಂಡಂತಿದೆ.

| ಅಬಕಾರಿ ಸಾಲು | ದಾಳಿ | ದಾಖಲಿಸಿದ ಪ್ರಕರಣಗಳು | | | ವಶಪಡಿಸಿಕೊಂಡ ವಸ್ತುಗಳು | | | ವಿಧಿಸಲಾದ ದಂಡ (ಕೋಟಿ ರೂ. ಗಳಲ್ಲಿ) |
|---|---|---|---|---|---|---|---|---|
| | | ಕಲಂ 32,34 (ಜಾಮೀನೀಯ ವಲ್ಲದ) | ಕಲಂ 15 (ಎ) (ಜಾಮೀನೀಯ) | ಒಟ್ಟು | ಮದ್ಯ (ಲೀ. ಗಳಲ್ಲಿ) | ಬಿಯರ್ /ಕಳ್ಳ ಭಟ್ಟಿ | ವಾಹನ | |
| 2020-21 | 73906 | 3480 | 22299 | 25779 | 366025 | 93298 | 1739 | 3.83 |
| 2021-22 | 79358 | 2927 | 26936 | 29863 | 217433 | 45871 | 1032 | 4.86 |
| 2022 ಅಕ್ಟೋಬರ್ ಮಾಹೆಯ ಅಂತ್ಯದವರೆಗೆ | 25890 | 1257 | 9102 | 10359 | 85382 | 122795 | 459 | 1.77 |
| ಒಟ್ಟು | 179154 | 7684 | 58337 | 66001 | 668840 | 261964 | 3230 | 10.46 |

ಆ ಕಳ್ಳಭಟ್ಟಿ ಸಾರಾಯಿ ತಯಾರಿಸುವ ಅಡ್ಡೆಗಳಿಗೆ ಕಡಿವಾಣ ಹಾಕಿ ಅಂತಹವರ ವಿರುದ್ಧ ಇಲ್ಲಿಯವರೆಗೂ ಎಷ್ಟು ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಲಾಗಿದೆ; ಅವರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ.

ಇಲಾಖೆಯು ಕಳ್ಳಭಟ್ಟಿ ಕುರಿತು ಶೂನ್ಯ ಸಹಿಷ್ಣುತೆಯನ್ನು ಹೊಂದಿದ್ದು, ಅಂತಹ ಅಕ್ರಮದಲ್ಲಿ ತೊಡಗುವವರ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆಯನ್ವಯ ಜಾಮೀನೀಯವಲ್ಲದ ಪ್ರಕರಣಗಳನ್ನು ದಾಖಲಿಸಿ ನ್ಯಾಯಾಲಯಕ್ಕೆ ಹಾಜರು ಪಡಿಸಲಾಗುತ್ತದೆ. ಕಳೆದ ಮೂರು ವರ್ಷಗಳ ಅವಧಿಯಲ್ಲಿ ಕಳ್ಳಭಟ್ಟಿ ಸಂಬಂಧ ರಾಜ್ಯದಲ್ಲಿ ದಾಖಲಿಸಿರುವ ಪ್ರಕರಣಗಳು, ದಸ್ತಗಿರಿಗೊಳಪಡಿಸಿದ ಆರೋಪಿತರ ಸಂಖ್ಯೆ ಹಾಗೂ ವಶಪಡಿಸಿಕೊಂಡ ಕಳ್ಳಭಟ್ಟಿ ವಿವರವು ಕೆಳಕಂಡಂತಿದೆ.

| ಅಬಕಾರಿ ಸಾಲು (ಜುಲೈ ರಿಂದ ಜೂನ್ ಮಾಹೆಯವರೆಗೆ) | ದಾಖಲಿಸಿರುವ ಪ್ರಕರಣಗಳ ಸಂಖ್ಯೆ | ದಸ್ತಗಿರಿ ಗೊಳಪಡಿಸಿದ ಆರೋಪಿತರ ಸಂಖ್ಯೆ | ವಶಪಡಿಸಿ ಕೊಂಡ ಕಳ್ಳಭಟ್ಟಿ (ಲೀ. ಗಳಲ್ಲಿ) |
|---|---|---|---|
| 2020–21 | 654 | 74 | 6974 |
| 2021–22 | 679 | 171 | 5969 |
| 2022–23 (ಅಕ್ಟೋಬರ್ ಮಾಹೆಯ ಅಂತ್ಯದವರೆಗೆ) | 274 | 84 | 3183 |

ಇ ಗ್ರಾಮೀಣ ಭಾಗದ ಜನರು ಅಕ್ರಮವಾಗಿ ತಯಾರಿಸಿದ ಕಳ್ಳಭಟ್ಟಿಯನ್ನು ಸೇವಿಸಿ ಆರೋಗ್ಯ ಹಾಳು ಮಾಡಿಕೊಳ್ಳುತ್ತಿದ್ದು, ಈ ಅಕ್ರಮ ದಂದೆ ಎಗ್ಗಿಲ್ಲದೇ ನಡೆಯುತ್ತಿದ್ದು ಇದರ ವಿರುದ್ಧ ಸೂಕ್ತ ಕಠಿಣ ಕಾನೂನು

ಕಳ್ಳಭಟ್ಟಿ ಸಂಬಂಧ ಕಳ್ಳಭಟ್ಟಿ ಕೇಂದ್ರಗಳ ಮೇಲೆ ವ್ಯವಸ್ಥಿತವಾಗಿ ಅಬಕಾರಿ ದಾಳಿ ನಡೆಸಿ ಕಳ್ಳಭಟ್ಟಿ ತಯಾರಿಕೆ ಪತ್ತೆ ಹಚ್ಚುವ ಹಾಗೂ ತಡೆಗಟ್ಟುವ ನಿಟ್ಟಿನಲ್ಲಿ ನಿರಂತರ ಕಾರ್ಯಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ. ಕಳ್ಳಭಟ್ಟಿ ತಯಾರಿಕೆಗೆ ಬಳಸಲ್ಪಡುವ ಕಚ್ಚಾ ವಸ್ತುಗಳನ್ನು ಒದಗಿಸುವವರ ಮೇಲೂ ನಿಗಾ ಇಡಲಾಗಿದ್ದು, ಹಿಂದಿನ



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 20/12/2022 11:33 AM

| | | |
|---|---|---|
| | ಕ್ರಮದ ಅವಶ್ಯಕತೆಯಿದ್ದು ಇದನ್ನು ಕಡಿವಾಣ ಹಾಕಲು ಸರ್ಕಾರ ಏನೇನು ಕ್ರಮ ಕೈಗೊಳ್ಳುತ್ತಿದೆ? | ಪ್ರಕರಣಗಳ ಪೂರ್ವಾಪರಾಧಿಗಳ ಚಲನವಲನಗಳ ಬಗ್ಗೆ ಅಬಕಾರಿ ಗಸ್ತಿನ ವೇಳೆಯಲ್ಲಿ ನಿಗಾ ಇಡಲಾಗಿದೆ. ಸರ್ಕಾರಿ/ಅರಣ್ಯ ಪ್ರದೇಶಗಳಲ್ಲಿ ಕಳ್ಳಭಟ್ಟಿ ತಯಾರಿಸಿದ ಪ್ರಕರಣಗಳಿಗೆ ಸಂಬಂಧಿಸಿದಂತೆ ಕಂದಾಯ/ ಅರಣ್ಯ/ಪೊಲೀಸ್ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮವೆಸಗದಂತೆ ಕ್ರಮ ಜರುಗಿಸಲಾಗಿದೆ. ಹಾಗೆಯೇ ಹೊರ ರಾಜ್ಯಗಳಿಂದ ಅಕ್ರಮವಾಗಿ ಸಾಗಾಟವಾಗುವ ಕಳ್ಳಭಟ್ಟಿ ಸಾರಾಯಿಯನ್ನು ತಡೆಗಟ್ಟಲು ನಿಯಮಿತವಾಗಿ ರಸ್ತೆಗಾವಲು ಮತ್ತು ರಸ್ತೆ ಗಸ್ತು ಕೈಗೊಂಡು ವಾಹನಗಳ ಹಾಗೂ ವ್ಯಕ್ತಿಗಳ ತಪಾಸಣೆಯನ್ನು ಕೈಗೊಳ್ಳಲಾಗುತ್ತಿದೆ. ನೆರೆಯ ರಾಜ್ಯಗಳ ಅಬಕಾರಿ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಪೂರ್ವಾಪರಾಧಿಗಳ ಬಗ್ಗೆ ಮಾಹಿತಿ ವಿನಿಮಯ ಮಾಡಿ ಜಂಟಿ ಕಾರ್ಯಾಚರಣೆಯನ್ನು ನಡೆಸಲಾಗುತ್ತಿದೆ. |

ಆಇ 105 ಇಎಲ್‌ಕ್ಯೂ 2022

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು.



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 20/12/2022 11:33 AM